ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 16-05-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ತುರ್ತು ಚಿಕಿತ್ಸಾ ಮತ್ತು ತೀವ್ರ ಗಾಯ ನಿಗಾ ಕೇಂದ್ರ, ಕಾಂಪ್ರಹೆನ್ಸಿವ್ ಹಿಮೋಫಿಲಿಯಾ ಕೇಂದ್ರ ಹಾಗೂ ಕೆಪಿಟಿಸಿಎಲ್ ಬ್ಲಾಕ್ ಉದ್ಘಾಟನೆ:<br>ಉದ್ಘಾಟನೆ:<br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ<br>ಮುಖ್ಯ ಅತಿಥಿ:<br>ಅನಂತ್‌ಕುಮಾರ್,<br>ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು<br>ಹಾಗೂ<br>ಸಚಿವ ಸಂಪುಟದ ಹಲವು ಸಚಿವರು | 17-05-2016<br>ಮಂಗಳವಾರ<br>ಬೆಳಿಗ್ಗೆ<br>11-00 ಗಂಟೆಗೆ | ವಿಕ್ಟೋರಿಯಾ ಆಸ್ಪತ್ರೆ ಆವರಣ,<br>ಕೆ. ಆರ್. ರಸ್ತೆ, ಕೋಟೆ,<br>ಬೆಂಗಳೂರು – 560 002 |
| 2 | 2015 ನೇ ಕ್ಯಾಲೆಂಡರ್ ವರ್ಷದ ಕನ್ನಡ ಮತ್ತು ಪ್ರಾದೇಶಿಕ ರಾಜ್ಯ ಚಲನಚಿತ್ರ ಪ್ರಶಸ್ತಿ ಕುರಿತು ಪತ್ರಿಕಾಗೋಷ್ಠಿ:<br>ಆರ್. ರೋಷನ್‌ಬೇಗ್,<br>ಮೂಲ ಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ಹಜ್ ಸಚಿವರು | 17-05-2016<br>ಮಂಗಳವಾರ<br>ಸಂಜೆ<br>4-00 ಗಂಟೆಗೆ | ವಾರ್ತಾ ಸೌಧ,<br>ಸಭಾಂಗಣ,<br>ಭಗವಾನ್ ಮಹಾವೀರ ರಸ್ತೆ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

## ಕಾಲೇಜು ವಿದ್ಯಾರ್ಥಿಗಳಿಗಾಗಿ ಬೇಸಿಗೆ ಶಿಬಿರ

**ಬೆಂಗಳೂರು, ಮೇ 16 (ಕರ್ನಾಟಕ ವಾರ್ತೆ)**

ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ (ಬೇಸ್) ಸಂಸ್ಥೆಯು ಪಿ.ಯು.ಸಿ. ಮತ್ತು ಬಿ.ಎಸ್.ಸಿ. ವಿದ್ಯಾರ್ಥಿಗಳಿಗಾಗಿ ಬೇಸಿಗೆ ಶಿಬಿರವನ್ನು ಏರ್ಪಡಿಸಿದೆ.

ಈ ಕಾರ್ಯಕ್ರಮವು ಬೆಂಗಳೂರಿನ ಪ್ರತಿಷ್ಠಿತ ಸಂಶೋಧನಾ ಕೇಂದ್ರಗಳ ವಿಜ್ಞಾನಿಗಳು ನಡೆಸಿಕೊಡುವ ಅಂತರಕ್ರಿಯಾತ್ಮಕ ಚರ್ಚೆಗಳನ್ನು ಒಳಗೊಂಡಿದ್ದು, ದ್ವಿತೀಯ ಪಿ.ಯ.ಸಿ. ಮತ್ತು ಬಿ.ಎಸ್.ಸಿ. ವಿದ್ಯಾರ್ಹತೆ ಹೊಂದಿರುವ ವಿಜ್ಞಾನ ಸಂಶೋಧನೆಯಲ್ಲಿ ಆಸಕ್ತಿಯುಳ್ಳ ವಿದ್ಯಾರ್ಥಿಗಳು ಮೇ 23 ರಿಂದ ಜೂನ್ 2 ರವರೆಗೆ ನಗರದ ಜವಾಹರ್‌ಲಾಲ್ ನೆಹರು ತಾರಾಲಯ, ಶ್ರೀ ಟಿ. ಚೌಡಯ್ಯ ರಸ್ತೆ, ಹೈ ಗ್ರೌಂಡ್ಸ್, ಬೆಂಗಳೂರು – 560 001 ಇಲ್ಲಿ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1–30 ಗಂಟೆವರೆಗೆ ನಡೆಯಲಿದೆ. ಸೀಮಿತವಾದ ಪ್ರವೇಶಾವಕಾಶವಿರುವ ಹಿನ್ನೆಲೆಯಲ್ಲಿ ಮೊದಲು ನೋಂದಾಯಿಸಿಕೊಂಡವರಿಗೆ ಮೊದಲ ಆದ್ಯತೆ ನೀಡಲಾಗುವುದು.

ಪೂರ್ಣಿಮ:ಜಿಪಿಆರ್.

## ವಿಜಯಪುರ ಮಿಲಿಟರಿ ಬಾಲಕರ ವಸತಿ ನಿಲಯಕ್ಕೆ ಪ್ರವೇಶ

**ಬೆಂಗಳೂರು, ಮೇ 16 (ಕರ್ನಾಟಕ ವಾರ್ತೆ)**

ವಿಜಯಪುರ ನಗರದಲ್ಲಿರುವ ಮಿಲಿಟರಿ ಬಾಲಕರ ವಸತಿ ನಿಲಯದಲ್ಲಿ 2016–17 ನೇ ಶೈಕ್ಷಣಿಕ ವರ್ಷಕ್ಕಾಗಿ 5ನೇ ತರಗತಿಯಿಂದ ಪಿ.ಯು.ಸಿ. ಹಾಗೂ ಡಿಪ್ಲೋಮಾದಲ್ಲಿ ಓದುತ್ತಿರುವ ಕರ್ನಾಟಕ ರಾಜ್ಯದ ಮಾಜಿ ಸೈನಿಕರ ಮತ್ತು ಅವಲಂಬಿತರ ಗಂಡು ಮಕ್ಕಳಿಗೆ ಆದ್ಯತೆ ಹಾಗೂ ಅರ್ಹತೆ ಮೇರೆಗೆ ಉಚಿತ ಪ್ರವೇಶವನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿಜಯಪುರ ನಗರದಲ್ಲಿರುವ ವಿದ್ಯಾ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ನಂತರವೇ ನಿಲಯದಲ್ಲಿ ಪ್ರವೇಶ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಬೆಂಗಳೂರು ನಗರ ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 08352–250913 ಮೂಲಕ ಸಂಪರ್ಕಿಸಬಹುದು. ಅಲ್ಲದೆ ವೆಬ್‌ಸೈಟ್ ವಿಳಾಸ sainikwelfare_bijapur@yahoo.com, sainikwefarebijapur@gmail.com ಇದರ ಮೂಲಕವು ಹೆಚ್ಚಿನ ಮಾಹಿತಿ ಪಡೆಯಬಹುದು.

ಪೂರ್ಣಿಮ:ಜಿಪಿಆರ್.

## ಸಾರ್ವಜನಿಕ ಬಹಿರಂಗ ವಿಚಾರಣೆ

**ಬೆಂಗಳೂರು, ಮೇ 16 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಗೆ ಬರುವ ವಿವಿಧ ಜಾತಿ ಜನಾಂಗಗಳನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಹೊಸದಾಗಿ ಸೇರಿಸಲು, ಪ್ರವರ್ಗ ಬದಲಾವಣೆಗೆ ಪರ್ಯಾಯ ಪದ ಸೇರ್ಪಡೆಗೆ ಮತ್ತು ಕಾಗುಣಿತ ದೋಷ ತಿದ್ದುಪಡಿಗೆ ಸಂಬಂಧಿಸಿದಂತೆ ಮೇ 19 ರಂದು ಬೆಳಿಗ್ಗೆ 11–00 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಫಿಡವಿಟ್ ಮೂಲಕ ಮನವಿಗಳನ್ನು ಸ್ವೀಕರಿಸಲಿದೆ ಎಂದು ಆಯೋಗವು ಪ್ರಕಟಣೆಯಲ್ಲಿ ತಿಳಿಸಿದೆ.

ಪೂರ್ಣಿಮ:ಜಿಪಿಆರ್.

## ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಅರ್ಹತಾ ಪಟ್ಟಿ ಪ್ರಕಟ

**ಬೆಂಗಳೂರು, ಮೇ 16 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕವು 4–10–2015 ರಂದು ರಾಜ್ಯಾದ್ಯಂತ ನಡೆಸಿದ ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಜೇಷ್ಠತೆಯಾನುಸಾರ ಹಾಗೂ ಅವರ ಮೀಸಲಾತಿಗಳಿಗೆ ಅನುಗುಣವಾಗಿ 1:2 ರ ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ನೋಂದಣಿ ಸಂಖ್ಯೆಯುಳ್ಳ ಅರ್ಹತಾ ಪಟ್ಟಿಯನ್ನು ಆಯೋಗದ ಅಂತರ್ಜಾಲ http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಮೂಲ ದಾಖಲೆಗಳ ಪರಿಶೀಲನಾ ದಿನಾಂಕವನ್ನು ನಂತರದಲ್ಲಿ ಪ್ರಕಟಿಸಲಾಗುವುದು ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

ಪೂರ್ಣಿಮ:ಜಿಪಿಆರ್.